# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **533 (636)** |
| ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 22.07.2024 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ.ಸಂ | ಪ್ರಶ್ನೆ | ವಿವರ |
|---|---|---|
| ಅ) | ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಸುಧಾರಣೆ ತರುವ ನಿಟ್ಟಿನಲ್ಲಿ ಜಾರಿಗೊಳಿಸಲಾದ ವೆಬ್ ಕಾಸ್ಟಿಂಗ್ ವ್ಯವಸ್ಥೆಯಿಂದ ಫಲಿತಾಂಶದಲ್ಲಿ ಕುಸಿತ ಕಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸದರಿ ಫಲಿತಾಂಶ ಕುಸಿತವು ಶಿಕ್ಷಣ ತಜ್ಞರು, ಪಾಲಕರನ್ನು ತಲ್ಲಣಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು) | ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪಾರದರ್ಶಕತೆಯನ್ನು ಕಾಯ್ದುಕೊಂಡು ಗುಣಮಟ್ಟದ ಫಲಿತಾಂಶವನ್ನು ನೀಡುವ ಸಂಬಂಧ ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಸಿ.ಸಿ.ಟಿ.ವಿ. ಕ್ಯಾಮರಾಗಳನ್ನು ಅಳವಡಿಸಲಾಗಿದೆ. ಸದರಿ ಸಿ.ಸಿ.ಟಿ.ವಿ. ಕ್ಯಾಮರಗಳಲ್ಲಿ ದಾಖಲಾಗುವ ದೃಶ್ಯಾವಳಿಗಳನ್ನು ವೆಬ್ ಕಾಸ್ಟಿಂಗ್ ಮೂಲಕ ಜಿಲ್ಲಾ ಹಂತದಲ್ಲಿ ವೀಕ್ಷಣೆ ಮಾಡಲು ಕ್ರಮವಹಿಸಲಾಗಿತ್ತು. ಇದರಿಂದ 2024ರಲ್ಲಿ ಗುಣಮಟ್ಟದ ಫಲಿತಾಂಶ ಬಂದಿರುತ್ತದೆ. |
| ಆ) | ರಾಜ್ಯಪಠ್ಯ ಶಾಲೆಗಳಲ್ಲಿ ಮಕ್ಕಳು ಕನಿಷ್ಠ ಅಂಕಗಳನ್ನು ಪಡೆಯದಿರುವುದು, ರಾಜ್ಯ ಪಠ್ಯಕ್ರಮದಲ್ಲಿ ಸರ್ಕಾರದ ಹೊಣೆಗಾರಿಕೆ ಪ್ರದರ್ಶಿಸುವುದು ಫಲಿತಾಂಶ ಕುಸಿತಕ್ಕೆ ಕಾರಣವಾಗಿದೆಯೇ; ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ತೇರ್ಗಡೆಯಾದ 6.31 ಲಕ್ಷದಲ್ಲಿ 3.21 ಲಕ್ಷ ಮಕ್ಕಳ ಸರ್ಕಾರದ ಕೃಪಾಂಕದ ಅಂಕಗಳಿಂದ ಉತ್ತೀರ್ಣರಾಗಿರುವುದು ನಿಜವೇ; ಜಾಗತಿಕವಾಗಿ ಸ್ಪರ್ದಿಸಲು ಮಕ್ಕಳಿಗೆ ಕೇವಲ ಅಂಕಗಳು ಮಾತ್ರವಲ್ಲ, ಕೌಶಲ್ಯ ಕೂಡಾ ಮುಖ್ಯ ಎಂಬ ವಿಷಯ ಸರ್ಕಾರಕ್ಕೆ ತಿಳಿದಿಲ್ಲವೆ; ಈ ಕುರಿತು ಸರ್ಕಾರದ ನಿಲುವೇನು; (ಸಂಪೂರ್ಣ ಮಾಹಿತಿ ನೀಡುವುದು) | 2024ರ ಎಸ್.ಎಸ್.ಎಲ್.ಸಿ. ಪರೀಕ್ಷೆ -1 ಮತ್ತು 2ರಲ್ಲಿ ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳಲ್ಲಿ ಶೇಕಡ 81 ರಷ್ಟು ವಿದ್ಯಾರ್ಥಿಗಳು ತೇರ್ಗಡೆಯಾಗಿರುತ್ತಾರೆ. ಪರೀಕ್ಷೆ-3ರಲ್ಲಿ ಇನ್ನೂ ಉತ್ತಮ ಫಲಿತಾಂಶ ಬರುವ ನಿರೀಕ್ಷೆ ಹೊಂದಲಾಗಿದೆ. 3.21 ಲಕ್ಷ ಮಕ್ಕಳಿಗೆ ಕೃಪಾಂಕ ನೀಡಿರುವುದಿಲ್ಲ. ಪ್ರಸ್ತುತ ಸಂದರ್ಭ ಸ್ಪರ್ಧಾತ್ಮಕ ಯುಗ ಎಂಬುದು ಸರ್ಕಾರದ ಗಮನದಲ್ಲಿದೆ. ಹಾಗಾಗಿ ಮಕ್ಕಳಿಗೆ ಪಠ್ಯಕ್ರಮದ ಜೊತೆಗೆ ಕೌಶಲ್ಯಯುತವಾದ ಸಹಪಠ್ಯ ಚಟುವಟಿಕೆಗಳು ಹಾಗೂ ನ್ಯಾಷನಲ್ ಸ್ಕಿಲ್ಸ್ ಕ್ವಾಲಿಫಿಕೇಷನ್ಸ್ ಫ್ರೇಮ್‌ವರ್ಕ್ (ಎನ್. ಎಸ್.ಕ್ಯೂ.ಎಫ್) ಹಾಗೂ ಕಿರಿಯ ತಾಂತ್ರಿಕ (ಜೆ.ಟಿ.ಎಸ್) ಶಾಲೆಗಳಲ್ಲಿ ಕೌಶಲ್ಯಕ್ಕೆ ಸಂಬಂಧಿಸಿದ ವೃತ್ತಿಪರ ವಿಷಯಗಳನ್ನು ಅಳವಡಿಸಿಕೊಂಡು ಬೋಧನೆ ಮಾಡಲಾಗುತ್ತಿದೆ. |
| ಇ) | ಶಾಲಾ ಶಿಕ್ಷಣದಲ್ಲಿ ಮಕ್ಕಳ ಕಲಿಕಾ ಸಾಮರ್ಥ್ಯ ಹೆಚ್ಚಿಸದಿದ್ದಲ್ಲಿ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಯಲ್ಲಿನ 3 ವಾರ್ಷಿಕ ಪರೀಕ್ಷೆಗಳೂ ಕೂಡಾ ಪ್ರಯೋಜನಕ್ಕೆ ಬಾರದೇ ಇರುವ ವಿಷಯ ಸರ್ಕಾರದ ಗಮನಕ್ಕೆ ಇದೆಯೇ; ಇದ್ದಲ್ಲಿ ಸರ್ಕಾರ ಮಕ್ಕಳ ಕಲಿಕಾ | • ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಪರೀಕ್ಷೆಗಳಿಗೆ ಮೂರು ವಾರ್ಷಿಕ ಪರೀಕ್ಷೆ ನಡೆಸುವುದರಿಂದ ವಿದ್ಯಾರ್ಥಿಗಳಿಗೆ ಅನುಕೂಲವಾಗಿದೆ.<br>• ಮೂರು ಪರೀಕ್ಷೆಗಳನ್ನು ನಡೆಸುವುದರಿಂದ ಹೆಚ್ಚಿನ ವಿದ್ಯಾರ್ಥಿಗಳಿಗೆ ಮುಂದಿನ ವ್ಯಾಸಂಗಕ್ಕೆ ಅನುಕೂಲವಾಗಿದೆ.<br>• ವಿಶೇಷವಾಗಿ ಎಸ್.ಎಸ್.ಎಲ್.ಸಿ./ಪಿ.ಯು.ಸಿ. ವಿದ್ಯಾರ್ಥಿಗಳಿಗೆ ಮೂರು ಪರೀಕ್ಷೆಗಳಿಂದ ಅವರುಗಳ |

| | | |
|---|---|---|
| | ಮಟ್ಟವನ್ನು ಸುಧಾರಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ತೆಗೆದುಕೊಂಡಿದೆ: (ವಿವರ ನೀಡುವುದು). | ಫಲಿತಾಂಶ ಉತ್ತಮಪಡಿಸಕೊಳ್ಳಲು ಅವಕಾಶವಾಗಿದೆ. ಈ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆ-3 ಕ್ಕೆ 96,490 ವಿದ್ಯಾರ್ಥಿಗಳು ನೊಂದಾಯಿಸಿಕೊಂಡಿದ್ದು, ಸದರಿ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ ತೇರ್ಗಡೆಯಾಗುವುದರಿಂದ ಅವರ ಮುಂದಿನ ವ್ಯಾಸಂಗಕ್ಕೆ ಅನುಕೂಲವಾಗುತ್ತದೆ.<br>• 2023 ರ ದ್ವಿತೀಯ ಪಿ.ಯು.ಸಿ ಪರೀಕ್ಷೆ-3ಕ್ಕೆ 1,19,183 ವಿದ್ಯಾರ್ಥಿಗಳು ಹಾಜರಾಗಿ ಸದರಿ ವಿದ್ಯಾರ್ಥಿಗಳಲ್ಲಿ 41,961 ವಿದ್ಯಾರ್ಥಿಗಳು ತೇರ್ಗಡೆಯಾಗಿರುತ್ತಾರೆ. ಹಾಗೆಯೇ, 2024ರ ದ್ವಿತೀಯ ಪಿ.ಯು.ಸಿ ಪರೀಕ್ಷೆ-3ಕ್ಕೆ 75,446 ವಿದ್ಯಾರ್ಥಿಗಳು ಹಾಜರಾಗಿ ಸದರಿ ವಿದ್ಯಾರ್ಥಿಗಳಲ್ಲಿ 17,911 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದು ಅವರ ಮುಂದಿನ ವ್ಯಾಸಂಗಕ್ಕೆ ಅನುಕೂಲವಾಗುತ್ತದೆ.<br>• ಮೂರು ಪರೀಕ್ಷೆಗಳಲ್ಲಿ ಗಳಿಸಿದ ಅತ್ಯುತ್ತಮ ಅಂಕಗಳನ್ನು ಅಂತಿಮ ಫಲಿತಾಂಶದಲ್ಲಿ ತೆಗೆದುಕೊಳ್ಳುವುದರಿಂದ ವೃತ್ತಿಪರ ಶಿಕ್ಷಣ ಹಾಗೂ ಉನ್ನತ ಶಿಕ್ಷಣ ಕೋರ್ಸ್‌ಗಳಿಗೆ ದಾಖಲಾತಿ ಪಡೆಯಲು ಅನುಕೂಲವಾಗಿದೆ ಹಾಗೂ ಇದು ವಿದ್ಯಾರ್ಥಿ ಸ್ನೇಹಿಯಾದ ಕ್ರಮವಾಗಿರುತ್ತದೆ.<br><br>**ಸರ್ಕಾರಿ ಮಕ್ಕಳ ಕಲಿಕಾ ಮಟ್ಟವನ್ನು ಸುಧಾರಿಸಲು ಸರ್ಕಾರಿ ಪ್ರೌಢಶಾಲೆಗೆ ಸಂಬಂಧಿಸಿಂತೆ ಕೈಗೊಂಡ ಕ್ರಮಗಳು**<br><br>• ಇಂಗ್ಲೀಷ್ ವಿಷಯದಲ್ಲಿ ಶಿಕ್ಷಕರಿಗೆ RIESI ಮೂಲಕ ವಿಶೇಷ ತರಬೇತಿಯನ್ನು ಹಮ್ಮಿಕೊಂಡಿದೆ.<br>• ಶಿಕ್ಷಕರ ಕೊರತೆಯನ್ನು ನಿವಾರಿಸಲು ಪ್ರೌಢ ಶಾಲೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಿಸಿಕೊಂಡು ಪಾಠ ಬೋಧನೆ ನಡೆಸಲಾಗುತ್ತಿದೆ.<br>• ಶಾಲಾ ಉಸ್ತುವಾರಿ ನೋಡಲ್ ಅಧಿಕಾರಿಗಳಿಗೆ ದತ್ತು ಯೋಜನೆಯಲ್ಲಿ ಶಾಲೆಗಳನ್ನು ಹಂಚಿಕೆ ಮಾಡಿ ಶಾಲಾ ಗುಣಮಟ್ಟವನ್ನು ಹೆಚ್ಚಿಸಲು ಕ್ರಮವಹಿಸಲಾಗಿದೆ.<br>• SSLC ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಪಡೆಯಲು ನೆರವಾಗುವಂತೆ 2023-24ನೇ ಸಾಲಿನಲ್ಲಿ 9ನೇ ತರಗತಿಯ ವಿದ್ಯಾರ್ಥಿಗಳಿಗೆ ಗಣಿತ, ವಿಜ್ಞಾನ ಮತ್ತು ಆಂಗ್ಲ ವಿಷಯದಲ್ಲಿ ಮರು ಸಿಂಚನ ಕಾರ್ಯಕ್ರಮ ನಡೆಸಿ ಕಲಿಕಾ ಬಲವರ್ಧನೆಗೊಳಿಸಲಾಗಿದೆ.<br>• 2024-25ನೇ ಸಾಲಿನ SSLC ವಿದ್ಯಾರ್ಥಿಗಳು ಹಾಗೂ ಮುಂದೆ SSLC ಪರೀಕ್ಷೆಯನ್ನು ಸಮರ್ಥವಾಗಿ ಉತ್ತಮ ಫಲಿತಾಂಶದೊಂದಿಗೆ ತೇರ್ಗಡೆ ಹೊಂದಲು ಅನುಕೂಲವಾಗುವಂತೆ 8, 9 ಮತ್ತು 10ನೇ ತರಗತಿಯ ವಿದ್ಯಾರ್ಥಿಗಳಿಗೆ ಮರುಸಿಂಚನಾ ಹಮ್ಮಿಕೊಳ್ಳಲಾಗುತ್ತಿದೆ.<br>• ಶಿಕ್ಷಕರಿಗೆ 9-10ನೇ ತರಗತಿಗಳ ಕಲಿಕಾಫಲ ಆಧಾರಿತ ಕಲಿಕೆಗೆ ಸಂಬಂಧಿಸಿದಂತೆ ತರಬೇತಿಗಳನ್ನು ನೀಡಲಾಗಿದೆ.<br>• 2024-25ನೇ ಸಾಲಿನಲ್ಲಿ ಪ್ರೌಢಶಾಲೆಯ ಶಿಕ್ಷಕರಿಗೆ ವಿಷಯವಾರು ಕ್ಲಿಷ್ಟಾಂಶಗಳನ್ನು ಗುರುತಿಸಿ ಪರಿಹಾರ |

| | | |
|---|---|---|
| | | ಒದಗಿಸಲು ವಿಷಯವಾರು ಕ್ಲಸ್ಟರ್/ ಹೋಬಳಿವಾರು ಮಾಸಿಕ ಸಮಾಲೋಚನಾ ಸಭೆಗಳನ್ನು ಆಯೋಜಿಸಲಾಗುತ್ತಿದೆ. |
| ಈ) | ರಾಜ್ಯದಲ್ಲಿ ಕಲಿಕಾ ಗುಣಮಟ್ಟವು ದಿನದಿಂದ ದಿನಕ್ಕೆ ಕುಸಿತವಾಗುತ್ತಿರುವ ಬಗ್ಗೆ ಶಿಕ್ಷಣ ಇಲಾಖೆಯ ಪರದಿಗಳು ಹೇಳಿರುವುದು ನಿಜವೇ: ಕಲಿಕಾ ಗುಣಮಟ್ಟವನ್ನು ಸರಿದೂಗಿಸಬೇಕೆಂಬ ಉದ್ದೇಶದಿಂದಲೇ 2019ರಲ್ಲಿ ಆರ್.ಟಿ.ಇ ಕಾಯ್ದೆಗೆ ತಿದ್ದುಪಡಿ ತಂದು 5 ಮತ್ತು 8ನೇ ತರಗತಿ ಮಕ್ಕಳಿಗೆ ಮೌಲ್ಯಾಂಖನ ನಡೆಸಿ ವಿದ್ಯಾರ್ಥಿಗಳ ಕಲಿಕಾ ಗುಣಮಟ್ಟ ಮೌಲ್ಯಮಾಪನ ಮಾಡಬೇಕು ಎಂಬ ಆದೇಶವನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಲಾಗುತ್ತಿದೆಯೇ? | • 5 ಮತ್ತು 8 ನೇ ತರಗತಿ ವಿದ್ಯಾರ್ಥಿಗಳಿಗೆ ಕಳೆದ ಎರಡು ವರ್ಷಗಳಲ್ಲಿ ಮೌಲ್ಯಾಂಕನ ನಡೆಸಿ, ಫಲಿತಾಂಶವನ್ನು ಪ್ರಕಟಿಸಲಾಗಿದೆ.<br>• 9 ಮತ್ತು 11 ನೇ ತರಗತಿ ವಿದ್ಯಾರ್ಥಿಗಳಿಗೆ ಈ ಸಾಲಿನಲ್ಲಿ ಮೌಲ್ಯಾಂಕನ ನಡೆಸಿ, ಫಲಿತಾಂಶವನ್ನು ಪ್ರಕಟಿಸಲಾಗಿದೆ. |

**ಸಂಖ್ಯೆ: ಇಪಿ 192 ಎಸ್ಎಲ್‌ಬಿ 2024**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು